2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ನಂಜನಗೂಡು

**ಸಿ. ಸಿ. ನಂ.ಃ270/2015**

| | |
|---|---|
| ಆರೋಪಿಯ ಹೆಸರು | ಶ್ರೀನಿವಾಸ |
| ತಂದೆಯ ಹೆಸರು | ಲೇ.ವೆಂಕಟಪ್ಪ |
| ವಯಸ್ಸು | 55 ವರ್ಷಗಳು |
| ವಾಸ್ತವ್ಯ | ಡಾಃ ಬಿ.ಆರ್.ಅಂಬೇಡ್ಕರ್ ರಸ್ತೆ, ಆರ್.ಪಿ.ರಸ್ತೆ, ನಂಜನಗೂಡು ಪಟ್ಟಣ. |

ಅ. ಪ್ರ. ಸಂ. ಕಲಂ 313ರನ್ವಯ ಆರೋಪಿಯ ಹೇಳಿಕೆ

ಪ್ರಶ್ನೆ 1ಃ ನೀವು ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಉತ್ತರ ಃ

ಪ್ರಶ್ನೆ 2ಃ ಫ್ರಾಸಾ-1 ಎನ್.ರಾಮಲಿಂಗು, ಇವರು ತಮ್ಮ ಸಾಕ್ಷ್ಯದಲ್ಲಿ ಹೇಳುವುದೇನೆಂದರೆ ಆರೋಪಿಯಾದ ನೀವು ಹಾಗೂ ಫ್ರಾಸಾ-1 ರವರು ಪರಿಚಯಸ್ಥ ಮತ್ತು ಸ್ನೇಹಿತರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ಆರೋಪಿಯಾದ ನೀವು ನಿಮ್ಮ ವ್ಯವಹಾರದ ದರದು ನಿಮಿತ್ಯ ಹಣದ ಅವಶ್ಯಕತೆ ಇದೆ ಎಂದು ಫಿರ್ಯಾದುದಾರರನ್ನು ದಿಃ25.01.2013 ರಂದು ಭೇಟಿ ಮಾಡಿ ರೂ.4,80,000/- ಗಳನ್ನು ಪಡೆದುಕೊಂಡು ಮರುಪಾವತಿ ಮಾಡುವುದಾಗಿ ಒಪ್ಪಿರುತ್ತಾರೆ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರಶ್ನೆ 3 ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು ಆರೋಪಿಯಾದ ನೀವು ಸದರಿ ಸಾಲದ ಬಾಬ್ತು ನಿಮ್ಮ ಖಾತೆ ಹೊಂದಿರುವ ಸಿಂಡಿಕೇಟ್ ಬ್ಯಾಂಕ್, ನಂಜನಗೂಡು ಶಾಖೆಯ ಚೆಕ್ ನಂಃ700102 ನ್ನು ರೂ.4,80,000/–ಗಳಿಗೆ ದಿಃ25.02.2013 ಎಂದು ನಮೂದಿಸಿ ಫ್ರಾಸಾ-1 ರವರಿಗೆ ನೀಡಿದ್ದು ಸದರಿ ಚೆಕ್ಕನ್ನು ಫ್ರಾಸಾ-1 ರವರು ನಗದೀಕರಣ ಪಡಿಸಲು ಸಂಬಂಧಪಟ್ಟ ಬ್ಯಾಂಕಿಗೆ ಹಾಜರುಪಡಿಸಿದಾಗ ಆ ರೀತಿ ಖಾತೆ ಇರುವುದಿಲ್ಲ ಎಂಬ ಹಿಂಬರಹದೊಂದಿಗೆ ವಾಪಸ್ಸು ಬಂದಿದ್ದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರಶ್ನೆ 4 ಫ್ರಾಸಾ-1 ರವರು ಮುಂದುವರೆದು ಅವರ ಪರ ವಕೀಲರ ಮೂಲಕ ದಿಃ 20.03.2013 ರಂದು ಕಾನೂನು ರೀತ್ಯಾ ನೋಟಿಸನ್ನು ನೀಡಿದ್ದು, ಸದರಿ ನೋಟೀಸ್ ಜಾರಿಯಾಗಿದ್ದು, ಈ ರೀತ್ಯಾ ನೀವು ಅದಕ್ಕೆ ಜವಾಬು ಅಥವಾ ಹಣವನ್ನು ಮರುಪಾವತಿ ಮಾಡದೆ ಕಲಂ 138 ನೆಗೋಷಿಯಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಪ್ರಕಾರ ಅಪರಾಧ ಮಾಡಿರುವಿರಿ ಎಂದು ಸಾಕ್ಷ್ಯ

ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ

ಪ್ರಶ್ನೆ 5 ಫ್ರಾಸಾ-1 ರವರು ಮುಂದುವರೆದು, ಆರೋಪಿಯಾದ ನೀವು ಫ್ರಾಸಾ1 ರವರಿಗೆ ನೀಡಿದ ಚೆಕ್ಕನ್ನು ಹಾಜರುಪಡಿಸಿ ಅದು ನಿಪಿ-1 ರಂತೆ , ಅದರಲ್ಲಿರುವ ನಿಮ್ಮ ಸಹಿಯನ್ನು ನಿಪಿ-1 ಎ ಎಂದು, ಚೆಕ್ಕು ಅಮಾನ್ಯಗೊಂಡ ಬಗ್ಗೆ ಬ್ಯಾಂಕಿನವರು ನೀಡಿದ ಹಿಂಬರಹವನ್ನು ನಿಪಿ-2 ರಂತೆ ಹಾಜರುಪಡಿಸಿ, ದಿನಾಂಕಃ20.03.2013 ರಂದು ವಕೀಲರ ಮುಖಾಂತರ ಕಳುಹಿಸಿದ ನೋಟಿಸನ್ನು ನಿಪಿ-3 ಎಂದು, ಎರಡು ಅಂಚೆ ರಶೀದಿಯನ್ನು ನಿಪಿ-4 ಮತ್ತು ನಿಪಿ-5 ಎಂದು ಎರಡು ಅಂಚೆ ಸ್ವೀಕೃತಿಗಳನ್ನು ನಿಪಿ-6 ಮತ್ತು ನಿಪಿ-7 ಎಂದು, ಗುತ್ತಿಗೆದಾರರ ಪಾಸ್ ಪುಸ್ತಕವನ್ನು ನಿಪಿ-8 ಎಂದುದ ಎರಡು ಆರ್ ಟಿ ಸಿ ಪಹಣಿ ಪತ್ರಿಕೆಗಳನ್ನು ನಿಪಿ-9 ಮತ್ತು ನಿಪಿ-10 ಎಂದು, ಗುರುತಿಸಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ

ಪ್ರಶ್ನೆ 6ಃ ನಿಮಗೆ ಇನ್ನೂ ಏನಾದರೂ ಹೇಳುವುದು ಇದೆಯಾ?

ಉತ್ತರ ಃ

**ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕಃ ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.**

2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ.
ನಂಜನಗೂಡು